ವರ್ಗಾಯಿಸುವ ಮೂಲಕ ಹಾಗೂ ಆರೆಕಾಲಿಕ ಉಪನ್ಯಾಸಕರುಗಳನ್ನು ನಿಯೋಜಿಸುವ ಮೂಲಕ ಕೊರತೆ ನೀಗಿಸಲು ಕ್ರಮಕೈಗೊಳ್ಳಲಾಗುವುದು.

ಉಚಗಾಂವ್ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಶಾಲೆಗಳಲ್ಲಿ ಮುಖ್ಯೋಪಾಧ್ಯಯರ ಹಾಗೂ ಸಹ ಶಿಕ್ಷಕರ ಹುದ್ದೆಗಳನ್ನು ತುಂಬುವುದು.

2576 (2973) ಶ್ರೀ ಮನೋಹರ್ ಪುನ್ನಪ್ಪ ಕಾಡೊಲ್ಕರ್ (ಉಚಗಾಂವ್) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1. ಬೆಳಗಾವಿ ಜಿಲ್ಲೆ ಉಚಗಾಂವ್ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಮುಖ್ಯೋಪಾಧ್ಯಾಯರ ಹಾಗೂ ಸಹಶಿಕ್ಷಕರ ಹುದ್ದೆಗಳನ್ನು ತುಂಬಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ? ವಿವರ ನೀಡುವುದು;

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

1. ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಹುದ್ದೆಗಳು ಮತ್ತು ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಗಳು ಖಾಲಿ ಇರುವುದಿಲ್ಲ.

ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಮುಖ್ಯ ಶಿಕ್ಷಕರ ಹುದ್ದೆಗಳು

04 - ಕನ್ನಡ

26 - ಮರಾಠಿ

01 - ಉರ್ದು

ಖಾಲಿ ಇರುವ ಸಹಶಿಕ್ಷಕರ ಹುದ್ದೆಗಳು

36 - ಕನ್ನಡ

35 - ಮರಾಠಿ

02 - ಉರ್ದು

01 - ದೈಹಿಂಕ ಶಿಕ್ಷಕ

ಈ ಖಾಲಿಯಿರುವ ಮುಖ್ಯ ಶಿಕ್ಷಕರ ಹುದ್ದೆಗಳನ್ನು ಬಡ್ತಿ ಮೂಲಕ ಶಿಕ್ಷಕರ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರುಗಳನ್ನು ಸ್ಥಳಾಂತರಿಸುವ ಹಾಗೂ ನೇರ ನೇಮಕಾತಿ ಮೂಲಕ ತುಂಬಲು ಕ್ರಮ ತೆಗೆದುಕೊಳ್ಳಲಾಗುವುದು.